# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **470** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ. ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **19.02.2024** |
| **ಉತ್ತರಿಸುವ ಸಚಿವರು** | **ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಬೀದರ್ ಜಿಲ್ಲೆಯಲ್ಲಿನ ಎಲ್ಲಾ ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು 24x7 ಕೇಂದ್ರಗಳ ಸಂಖ್ಯೆ ಎಷ್ಟು;</td><td>ಬೀದರ್ ಜಿಲ್ಲೆಯಲ್ಲಿನ ಎಲ್ಲಾ ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿರುವ ಒಟ್ಟು ಆರೋಗ್ಯ ಕೇಂದ್ರಗಳ ಕುರಿತು ಮಾಹಿತಿ ಈ ಕೆಳಕಂಡಂತೆ ನೀಡಲಾಗಿದೆ.
<table>
<tr><th>ಕ್ರ.ಸಂ</th><th>ವಿಧಾನಸಭಾ ಕ್ಷೇತ್ರಗಳು</th><th>ಪ್ರಾ.ಆ ಕೇಂದ್ರಗಳು</th><th>ಸ.ಆ ಕೇಂದ್ರಗಳು</th><th>24/7 ಪ್ರಾ.ಆ ಕೇಂದ್ರಗಳು</th></tr>
<tr><td>1.</td><td>ಬೀದರ್ ಉತ್ತರ</td><td>03</td><td>0</td><td>02</td></tr>
<tr><td>2.</td><td>ಬೀದರ್ ದಕ್ಷಿಣ</td><td>08</td><td>02</td><td>03</td></tr>
<tr><td>3.</td><td>ಹುಮ್ನಾಬಾದ್</td><td>08</td><td>02</td><td>01</td></tr>
<tr><td>4.</td><td>ಔರಾದ್(ಬಿ)</td><td>09</td><td>02</td><td>05</td></tr>
<tr><td>5.</td><td>ಬಸವಕಲ್ಯಾಣ</td><td>12</td><td>01</td><td>05</td></tr>
<tr><td>6.</td><td>ಭಾಲ್ಕಿ</td><td>12</td><td>01</td><td>04</td></tr>
</table></td></tr>
<tr><td>ಆ</td><td>ಈ ಕೇಂದ್ರಗಳಲ್ಲಿ ಅಗತ್ಯ ತಜ್ಞ ವೈದ್ಯರು/ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆಯೇ; ನೇಮಕ ಮಾಡದಿದ್ದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ;</td><td>ಈ ಕೇಂದ್ರಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಈ ಕೆಳಕಂಡಂತೆ ಕ್ರಮ ಕೈಗೊಂಡಿದೆ.<br>1. ಸರ್ಕಾರದ ಪತ್ರ ಸಂಖ್ಯೆ:ಆಕುಕ 453 ಹೆಚ್ಎಸ್ಹೆಚ್ 2022, ದಿನಾಂಕ:13.12.2022ರಲ್ಲಿ ರಾಜ್ಯದ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿಮಾಡಲು ಅನುಮತಿ ನೀಡಲಾಗಿದೆ.<br>2. ಸರ್ಕಾರದ ಆದೇಶ ಸಂಖ್ಯೆ:ಆಕುಕ 619 ಹೆಚ್ಎಸ್ಹೆಚ್ 2022, ದಿ:17.01.2024ರಲ್ಲಿ ಆಕುಕ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರನ್ನು ಕೆಲವು ಷರತ್ತುಗಳಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಿರುತ್ತಾರೆ.<br>3. ಇಲಾಖೆಯ ಮುಖಾಂತರ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ತಜ್ಞತೆ ಹುದ್ದೆಗೆ ನೇಮಿಸಲಾಗುತ್ತಿದೆ.<br><br>ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ 1 ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ತಜ್ಞ ವೈದ್ಯಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ತಜ್ಞರುಗಳ ಕೊರತೆಯನ್ನು ನೀಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.</td></tr>
</table>

| | | |
|---|---|---|
| ಇ | ಈ ಕೇಂದ್ರಗಳಿಗೆ ಅವಶ್ಯವಿರುವ ಔಷಧ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ; ಒದಗಿಸದಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ? (ವಿವರಒದಗಿಸುವುದು) | ಈ ಕೇಂದ್ರಗಳಿಗೆ ಅವಶ್ಯವಿರುವ ಔಷಧ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. |

**ಆಕುಕ 22 ಎಸ್‌ಎಂಎಂ 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ**
**ಸಚಿವರು**